**ದಿನಾಂಕ 18.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ಐಎಂವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಡಿಸ್ಚಾರ್ಜ್ ಸಮರಿಯನ್ನು **ನಿಪಿ 6** ಎಂದು, ಸಾಕ್ಷಿದಾರರ ಹೇಳಿಕೆಯೊಂದಿಗೆ ಹಾಜರುಪಡಿಸಿರುವ ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 7** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 8** ಎಂದು, ವೈದ್ಯರ ಸಲಹಾ ಚೀಟಿಗಳನ್ನು **ನಿಪಿ 9** ಎಂದು, ಲ್ಯಾಬ್ ವರದಿಯನ್ನು **ನಿಪಿ 10** ಎಂದು, ಕ್ಷ-ಕಿರಣಗಳನ್ನು **ನಿಪಿ 11** ಎಂದು, ಚಾಲನಾ ಪರವಾನಗಿ ಮತ್ತು ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 12 ಮತ್ತು 13** ಎಂದು ಗುರುತಿಸಲಾಯಿತು.

2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಎದುರುದಾರರ ಪರ ಮಾನ್ಯ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು .

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**